# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:18ನೇ ಡಿಸೆಂಬರ್, 2025**

**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್.ಎಲ್. ಭೋಜೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 54(538)

4ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ: ಯತೀಂದ್ರ ಎಸ್**. ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 55(601)

} ಮಾನ್ಯ ಮುಖ್ಯಮಂತ್ರಿಗಳು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ. **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಭಾರತ ಸಂವಿಧಾನದ 151(2)ನೇ ಅನುಚ್ಛೇಧದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಸಮಗ್ರ ವಿದ್ಯುತ್ ಅಭಿವೃದ್ಧಿ ಯೋಜನೆಯ (ಐಪಿಡಿಎಸ್) ಅನುಷ್ಠಾನದ ಮೇಲಿನ (ಕಾರ್ಯನಿರ್ವಹಣಾ ಲೆಕ್ಕಪರಿಶೋದನೆ–ವಾಣಿಜ್ಯ) (2025ರ ವರದಿ ಸಂಖ್ಯೆ–9) ವರದಿಯನ್ನು ಮಂಡಿಸುವುದು.

ಆ. **ಕಾರ್ಯದರ್ಶಿಯವರು:**

**ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ವಿಧೇಯಕವನ್ನು ಹಾಗೂ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುವುದು.**

## 04. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ವಿಧೇಯಕ, 2025
**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಯವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕ, 2025
**ಶ್ರೀ ಕೃಷ್ಣ ಭೈರೇಗೌಡ (ಮಾನ್ಯ ಕಂದಾಯ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಮಂಜುನಾಥ್ ಭಂಡಾರಿ** ಅವರು ಉಡುಪಿ ಜಿಲ್ಲೆಯ ರೈತರ ಹಿತದೃಷ್ಠಿಯಿಂದ ವಾರಾಹಿ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀ ಬಸನಗೌಡ ಬಾದರ್ಲಿ** ಅವರು ಹಗರಿಬೊಮ್ಮನಹಳ್ಳಿ ಮೂಲದ ವ್ಯಕ್ತಿಯೊಬ್ಬರು ಸಿಂಧನೂರು ತಾಲ್ಲೂಕಿನಲ್ಲಿ ಇಸ್ಪೀಟ್ ಗ್ಯಾಂಬ್ಲಿಂಗ್ ನಡೆಸುತ್ತಿರುವುದು ಹಾಗೂ ರಾಯಚೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಡ್ರಗ್ಸ್ ಮಾಫಿಯಾ ಚಟುವಟಿಕೆಗಳಿಂದಾಗಿ ಯುವ ಜನತೆಯ ಮೇಲೆ ದುಷ್ಪರಿಣಾಮ ಬೀರುವ ಮೂಲಕ ಸಮಾಜದ ಸ್ವಾಸ್ಥ್ಯ ಹದಗೆಡುತ್ತಿರುವ ನಿಟ್ಟಿನಲ್ಲಿ ಇಂತಹ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ವಿಭಾಗದ ಪೊಲೀಸ್ ಠಾಣೆಯಲ್ಲಿ ಸಿಬ್ಬಂದಿಗಳ ಕೊರತೆಯಿದ್ದು, ಪೊಲೀಸ್ ಇಲಾಖೆಯ ನಿಯಮಾವಳಿ ಎಸ್.ಓ.898 ರಂತೆ ಸಿಬ್ಬಂದಿಗಳನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

೦4. **ಡಾ: ಕೆ. ಗೋವಿಂದರಾಜ್** ಅವರು ಬಿ.ಬಿ.ಎಂ.ಪಿ. ವ್ಯಾಪ್ತಿಯ ಬೆಂಗಳೂರಿನ ಬ್ಯಾಟರಾಯನಪುರ, ಯಲಹಂಕ, ಕೆ.ಆರ್.ಪುರಂ, ರಾಜರಾಜೇಶ್ವರಿ ನಗರ, ಬೊಮ್ಮನಹಳ್ಳಿ, ದಾಸರಹಳ್ಳಿ, ಮಹದೇವಪುರ ಏಳು ನಗರ ಸಭೆಗಳು ಮತ್ತು ಕೆಂಗೇರಿ ಪುರಸಭೆಯನ್ನು ಒಳಗೊಂಡಂತೆ ಸರ್ವತೋಮುಖ ಬೆಳವಣಿಗೆಗಳ ಅಭಿವೃದ್ಧಿ ಕಾರ್ಯಗಳಿಗೆ ಹಣ ಮಂಜೂರಾಗಿದ್ದರೂ ಅಭಿವೃದ್ಧಿ ಕಾರ್ಯಗಳು ಪರಿಣಾಮಕಾರಿಯಾಗಿ ಈಡೇರದಿರುವ ಬಗ್ಗೆ ಮಾನ್ಯ ಉಪ ಮುಖ್ಯ ಮಂತ್ರಿಗಳ ಗಮನ ಸೆಳೆಯುವುದು.

..3..

೦೫. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಬೆಳಗಾವಿ ಜಿಲ್ಲೆ, ಖಾನಾಪೂರ ತಾಲ್ಲೂಕಿನ ಭೀಮಗಡ ಅಭಯಾರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ 14 ಹಳ್ಳಿಗಳು ಮತ್ತು ತಾಲ್ಲೂಕಿನ ಇತರೆ ವನವಾಸಿ ಪ್ರದೇಶದ ಊರುಗಳನ್ನು ಬೇರೆಡೆ ಸ್ಥಳಾಂತರಿಸಿ, ಪುನರ್ವಸತಿ ಕಾರ್ಯಕ್ಕೆ ಬಿಡುಗಡೆಯಾಗಿರುವ ಅನುದಾನ, ಪರಿಹಾರ ಹಾಗೂ ಈಗಾಗಲೇ ಜಮೀನು ಹೊಂದಿರುವ ಕುಟುಂಬಗಳ ಜೀವನೋಪಯಕ್ಕಾಗಿ ಪರ್ಯಾಯ ಜಮೀನು ನೀಡುವ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

೦೬. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನ ಹರಂದೂರಿನಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಹೆಣ್ಣು ಮಕ್ಕಳು ಅನುಮಾನಾಸ್ಪದವಾಗಿ ಸಾವಿಗೀಡಾಗಿದ್ದು, ತನಿಖೆ ನಡೆಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

೦೭. **ಶ್ರೀಯುತರುಗಳಾದ ಸಿ.ಟಿ. ರವಿ, ಭಾರತಿ ಶೆಟ್ಟಿ, ಕೇಶವ ಪ್ರಸಾದ್ ಎಸ್., ಪ್ರತಾಪ್ ಸಿಂಹ ನಾಯಕ್ ಕೆ. ಹಾಗೂ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್** ಅವರುಗಳು ಕೊಡಗು, ಹಾವೇರಿ ಮತ್ತು ರಾಯಚೂರು ಸೇರಿದಂತೆ ರಾಜ್ಯದ ಹಲವು ಮೆಡಿಕಲ್ ಕಾಲೇಜುಗಳಲ್ಲಿ ಔಷಧ ಖರೀದಿಗಾಗಿ ನಡೆಸಿದ ಟೆಂಡರ್ ಮೊತ್ತ ಹಾಗೂ ಚಿಕ್ಕಮಗಳೂರು ಮೆಡಿಕಲ್ ಕಾಲೇಜು ಮತ್ತು ಜಿಲ್ಲಾ ಆಸ್ಪತ್ರೆಗೆ ಔಷಧಿಗಳನ್ನು ಖರೀದಿಸುವಲ್ಲಿ ನಡೆಸಿದ ಟೆಂಡರ್‌ನ ಮೊತ್ತದಲ್ಲಿ ವ್ಯತ್ಯಾಸವಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿನ ಲೋಪದೋಷಗಳ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

೦೮. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು ಕಸಬಾ ಹೋಬಳಿ ಶಿವಾರ ಪಟ್ಟಣ್ಣ ಗ್ರಾಮದ ಸರ್ವೆ ನಂ.19/1ರಲ್ಲಿರುವ 1 ಎಕರೆ 23 ಗುಂಟೆ ಜಮೀನು ಹಾಗೂ ಸರ್ವೆ ನಂ.191/2ರಲ್ಲಿರುವ 3 ಎಕರೆ 10 ಗುಂಟೆ ಜಮೀನುಗಳನ್ನು ವಸತಿ ಉದ್ದೇಶಗಳಿಗಾಗಿ 2019ರಲ್ಲಿ ಭೂಪರಿವರ್ತನೆಗೊಂಡಿದ್ದರೂ, ಸದರಿ ಜಮೀನುಗಳನ್ನು ಕೆ.ಐ.ಎ.ಡಿ.ಬಿ ಅವರು ಭೂಸ್ವಾಧೀನಪಡಿಸಿಕೊಳ್ಳಲು ದಿನಾಂಕ:10.09.2024ರಂದು ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

೦೯. **ಶ್ರೀಮತಿ ಬಲ್ಕೀಸ್ ಬಾನು, ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್), ಶ್ರೀ ರಮೇಶ್ ಬಾಬು ಹಾಗೂ ಶ್ರೀ ಡಿ.ಎಸ್. ಅರುಣ್** ಅವರುಗಳು ಶಿವಮೊಗ್ಗ ತಾಲ್ಲೂಕಿನ ನಿದಿಗೆ ಹೋಬಳಿಯ ಊರಗಡೂರು ಗ್ರಾಮದ ಸರ್ವೆ ನಂ.340 ರಿಂದ 357ರವರೆಗೆ ಒಟ್ಟು 60 ಎಕರೆ 30 ಗುಂಟೆ ಜಮೀನನ್ನು ಶಿವಮೊಗ್ಗ-ಭದ್ರಾವತಿ ನಗರ ಪ್ರಾಧಿಕಾರದಿಂದ ವಸತಿ ಯೋಜನೆ ರೂಪಿಸಲು ಭೂಸ್ವಾಧೀನ ಪಡಿಸಿಕೊಂಡು ಪರಿಹಾರ ಮಂಜೂರು ಮಾಡಿದ್ದರು ಭೂಮಾಲೀಕರಿಗೆ ಪಾವತಿಸದಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರ ಗಮನ ಸೆಳೆಯುವುದು.

೧೦. **ಶ್ರೀ ಪುಟ್ಟಣ್ಣ** ಅವರು ಪೊಲೀಸ್ ಇನ್ಸ್‌ಪೆಕ್ಟರ್ (ಐಎಸ್‌ಡಿ) ಒಬ್ಬರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ, ಅಮಾನತ್ತಿನಲ್ಲಿ ಇರಿಸಲಾಗಿರುವುದನ್ನು ತೆರವುಗೊಳಿಸಿ ಸ್ಥಳ ನಿಯುಕ್ತಿಗೊಳಿಸುವಂತೆ ಉಚ್ಚ ನ್ಯಾಯಾಲಯ ಆದೇಶ ನೀಡಿದ್ದರೂ ಸಹ ಇದುವರೆವಿಗೂ ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಶ್ರೀ ಪಿ.ಹೆಚ್. ಪೂಜಾರ್** ಅವರುಗಳು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ವಸತಿ ಹಾಗೂ ಜಮೀನುಗಳನ್ನು ಕಳೆದುಕೊಂಡ ರೈತರಿಗೆ ಪುನರ್ ವಸತಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಉಪ ಮುಖ್ಯಮಂತ್ರಿಗಳು)

02. **ಶ್ರೀ ಬಿ.ಜಿ. ಪಾಟೀಲ್** ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಾರಂಪರಿಕ ವೈದ್ಯ ಪದ್ಧತಿಯನ್ನು ಬಳಸಿ ಕಾಯಿಲೆಗಳನ್ನು ಗುಣಪಡಿಸುವವರ ಮಕ್ಕಳಿಗೆ ಬಿ.ಎ.ಎಂ.ಎಸ್ ವಿದ್ಯಾಭ್ಯಾಸದಲ್ಲಿ ಶೇ.2ರಷ್ಟು ಮೀಸಲಾತಿ ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

03. **ಡಾ: ತಳವಾರ್ ಸಾಬಣ್ಣ** ಅವರು ನ್ಯಾ. ಬಚಾವತ್ ಆಯೋಗದ ತೀರ್ಪಿನ ರೀತ್ಯಾ, ಕಲಬುರಗಿ, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಯ ಜನರು ಭೀಮಾ ನದಿಯ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಅನುವಾಗುವಂತೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಉಪ ಮುಖ್ಯಮಂತ್ರಿಗಳು)

04. **ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಎಸ್.ಎಲ್. ಭೋಜೇಗೌಡ, ಡಾ: ಯತೀಂದ್ರ ಎಸ್., ಶ್ರೀ ಡಿ.ಎಸ್. ಅರುಣ್, ಶ್ರೀ ಕೆ.ಎಸ್. ನವೀನ್, ಶ್ರೀ ಶಿವಕುಮಾರ್ ಕೆ. ಹಾಗೂ ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)** ಅವರುಗಳು ಕಾಡು ಪ್ರಾಣಿಗಳು ಹಾಗೂ ಮಾನವನ ಸಂಘರ್ಷದಲ್ಲಿ ಹಲವಾರು ಅಮಾಯಕ ಜೀವಗಳು ಬಲಿಯಾಗುತ್ತಿರುವ ಬಗ್ಗೆ ಹಾಗೂ ಮೃತರ ಕುಟುಂಬದವರಿಗೆ ಪರಿಹಾರ ಒದಗಿಸುವುದಲ್ಲದೆ ಪ್ರಾಣಿಗಳ ಅಸಹಜ ಸಾವು ಹಾಗೂ ಮೂಲಭೂತವಾಗಿ ಕಾಡು ಪ್ರಾಣಿಗಳು ನಾಡಿನೊಳಗೆ ಬಾರದಂತೆ ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು)

05. **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಸಿ.ಟಿ. ರವಿ, ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಇತರರು** ರಾಜ್ಯದಲ್ಲಿ ಬಾಲಕಿಯರ ಮತ್ತು ಮಹಿಳೆಯರ ಮೇಲೆ ದೌರ್ಜನ್ಯ, ಕೊಲೆ, ಅತ್ಯಾಚಾರ, ಗಲಭೆ, ಸುಲಿಗೆ, ಡ್ರಗ್ಸ್ ಹಾಗೂ ಇನ್ನಿತರೆ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಕಾನೂನು ಸುವ್ಯವಸ್ಥೆ ವಿಫಲವಾಗಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

06. **ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) ಹಾಗೂ ಶ್ರೀ ಡಿ.ಎಸ್. ಅರುಣ್** ಅವರುಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ 15 ಜಿಲ್ಲಾ ಅಧಿಕಾರಿ ಹುದ್ದೆಗಳನ್ನು ಡಿ.ಪಿ.ಎ.ಆರ್. ಅನುಮತಿ ಇಲ್ಲದೇ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಅಳವಡಿಸಿಕೊಳ್ಳುವ ಷರತ್ತಿಗೊಳಪಟ್ಟು ಕಾರ್ಯಕಾರಿ ಆದೇಶ ಹೊರಡಿಸಿದ್ದು, ತದನಂತರ ಯಾವುದೇ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದೆ ಕಾನೂನು ಬಾಹಿರವಾಗಿ ಇನ್ನುಳಿದ 16 ಜಿಲ್ಲಾ ಅಧಿಕಾರಿ ಹುದ್ದೆಗಳಿಗೆ ದಿನಾಂಕ:15.12.2025ರಂದು ಮುಂಬಡ್ತಿ ನೀಡಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

07. **ಶ್ರೀ ಶಿವಕುಮಾರ್ ಕೆ.** ಅವರು ಆದಿವಾಸಿ ಜನಾಂಗದವರನ್ನು ಪರಿಶಿಷ್ಠ ಪಂಗಡದ ಒಳಮೀಸಲಾತಿಗೆ ಸೇರಿಸುವುದು ಹಾಗೂ ಅವರುಗಳಿಗೆ ಪುನರ್ವಸತಿ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ಪ್ರೊ. ಮುಜಾಫರ್ ಅಸ್ಸಾದಿ ವರದಿಯಲ್ಲಿರುವ ಅಂಶಗಳನ್ನು ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಮುಖ್ಯಮಂತ್ರಿಗಳು)

**07. ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ**

**08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ**

**ಶ್ರೀಯುತರುಗಳಾದ:**

| | |
|---|---|
| **ಮಾನ್ಯ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ. ಹಾಗೂ ಇತರರು** | ರಾಜ್ಯದಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಪಡಿಸುವುದು ಹಾಗೂ ನಾಶಗೊಂಡ ಬೆಳೆಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ವಿಷಯದ ಕುರಿತು |

**09. ಅರ್ಧ ಗಂಟೆ ಕಾಲಾವಧಿ ಚರ್ಚೆ**

ಅ. ಬಿ.ಪಿ.ಎಲ್ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಣೆ ಮತ್ತು ಮಾರಾಟ ಮಾಡಿರುವ ಪ್ರಕರಣಗಳ ಬಗ್ಗೆ ದಿನಾಂಕ:08.12.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:01(14)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಸಿ.ಟಿ. ರವಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಗರ್ಭಿಣಿ ಸ್ತ್ರೀಯರಿಗೆ ಹೆರಿಗೆಯ ಸಂದರ್ಭದಲ್ಲಿ ನೋವು ನಿವಾರಕ ಔಷಧಿ ನೀಡುವ ಕುರಿತು ದಿನಾಂಕ:08.12.2025ರ ಚುಕ್ಕೆ ರಹಿತ **ಪ್ರಶ್ನೆ ಸಂಖ್ಯೆ:95(03)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ರಮೇಶ್ ಬಾಬು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಇ. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು ದಿನಾಂಕ:11.12.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:47(585)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

..6..

ಈ. ನಿಗಮ/ಮಂಡಳಿಗಳಿಗೆ ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನಗಳ ಕುರಿತು ದಿನಾಂಕ:12.12.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:68(676)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಹೆಚ್.ಪಿ. ಸುಧಾಮ್ ದಾಸ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಉ. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನದ ಕುರಿತು ದಿನಾಂಕ:12.12.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:69(666)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ಹೇಮಲತಾ ನಾಯಕ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಋ. ವೃತ್ತಿ ಶಿಕ್ಷಣ (ಜೆ.ಓ.ಸಿ) ಕೋರ್ಸ್ ಕುರಿತು ದಿನಾಂಕ:15.12.2025ರ ಚುಕ್ಕೆ ರಹಿತ **ಪ್ರಶ್ನೆ ಸಂಖ್ಯೆ:737(929)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ಬಲ್ಕೀಸ್ ಬಾನು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**